# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 752

**ಸದಸ್ಯರ ಹೆಸರು** : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 12.12.2025.

**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗರ್ಭಿಣಿ ಮತ್ತು ಬಾಣಂತಿಯರಲ್ಲಿನ ಅಪೌಷ್ಟಿಕತೆಯನ್ನು ಹೋಗಲಾಡಿಸಲು ಜಾರಿಗೆ ತರಲಾದ ಮಾತೃ ಪೂರ್ಣ ಯೋಜನೆಗೆ ಆಸಕ್ತಿ ತೋರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಾತೃಪೂರ್ಣ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿದಿನ ಅಂಗನವಾಡಿ ಕೇಂದ್ರಗಳಲ್ಲಿಯೇ ಪೌಷ್ಟಿಕಾಂಶಯುಕ್ತ ಬಿಸಿಯೂಟವನ್ನು ಒದಗಿಸಲಾಗುತ್ತಿತ್ತು.<br><br>2024-25ನೇ ಸಾಲಿನಿಂದ, ಮಾತೃಪೂರ್ಣ ಯೋಜನೆಯ ಫಲಾನುಭವಿಗಳಿಗೆ ಆದ್ಯತೆ ಮೇರೆಗೆ ಸಾಮಾಜಿಕ / ಆರ್ಥಿಕ ಮತ್ತು ಆರೋಗ್ಯ, ಇತರೆ ಕಾರಣಗಳಿಂದ ಅಗತ್ಯವಿರುವ ಕಚ್ಚಾ ಆಹಾರ ಸಾಮಗ್ರಿಗಳನ್ನು ಮನೆಗೆ (THR) ಪಡೆಯಲು ಅಥವಾ ಅಂಗನವಾಡಿ ಕೇಂದ್ರದಲ್ಲಿಯೇ ಪೌಷ್ಟಿಕಯುಕ್ತ ಬಿಸಿಯೂಟವನ್ನು ಸ್ವೀಕರಿಸಲು ಆಯ್ಕೆಗೆ ಅವಕಾಶ ಕಲ್ಪಿಸಲಾಗಿದೆ. ಈ ಬದಲಾವಣೆಯಿಂದಾಗಿ, ಸದರಿ ಯೋಜನೆಯಡಿ ಫಲಾನುಭವಿಗಳ ಸಂಖ್ಯೆಯಲ್ಲಿ ಗಣನೀಯ ಹೆಚ್ಚಳವಾಗಿರುತ್ತದೆ.<br><br>ಇಲಾಖೆಯ ಅಂಕಿ-ಅಂಶಗಳನ್ವಯ, ನಿಗದಿತ ಗುರಿಯಂತೆ ಫಲಾನುಭವಿಗಳು ನಿಯಮಿತವಾಗಿ ಈ ಯೋಜನೆಯ ಪ್ರಯೋಜನವನ್ನು ಪಡೆಯುತ್ತಿದ್ದಾರೆ. |
| ಆ) | ಯೋಜನೆಯಲ್ಲಿ ಬಾಣಂತಿಯವರಿಗೆ ಹಾಗೂ ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸಲು ನಿಗದಿಪಡಿಸಿರುವ ಮೊತ್ತವು ತೀರಾ ಕಡಿಮೆ ಇರುವುದರ ಬಗ್ಗೆ ಆಕ್ಷೇಪ ಕೇಳಿ ಬಂದಿದೆಯೇ; | ಹೌದು, ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿ ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ಪೂರಕ ಪೌಷ್ಟಿಕ ಆಹಾರ ನಿಗದಿಪಡಿಸಿರುವ ಮೊತ್ತವು ಕಡಿಮೆ ಇರುವುದರ ಬಗ್ಗೆ, ಆಕ್ಷೇಪ ಸ್ವೀಕೃತವಾಗಿರುತ್ತದೆ. |
| ಇ) | ಹಾಗಿದ್ದಲ್ಲಿ, ಕಳೆದ 8 ವರ್ಷಗಳಿಂದ ನೀಡುತ್ತಿರುವ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಕಳೆದ 8 ವರ್ಷಗಳಿಂದ ನೀಡುತ್ತಿರುವ ಮೊತ್ತವನ್ನು ಹೆಚ್ಚಿಸುವಂತೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

**ಸಂಖ್ಯೆ: ಮಮಇ 344 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು